# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 71(22)
ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 04-12-2023.
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅನುದಾನಿತ ಶಾಲಾ-ಕಾಲೇಜುಗಳ ನೌಕರರಿಗೆ ಜ್ಯೋತಿ ಸಂಜೀವಿನಿ ಆರೋಗ್ಯ ಸೌಲಭ್ಯವನ್ನು ಪ್ರಸ್ತುತ ನೀಡಲಾಗುತ್ತಿದೆಯೇ; | ಇಲ್ಲ |
| ಆ) | ಸದರಿ ಶಾಲಾ-ಕಾಲೇಜುಗಳ ನೌಕರರಿಗೆ ಜ್ಯೋತಿ ಸಂಜೀವಿನಿ ಆರೋಗ್ಯ ಸೌಲಭ್ಯವನ್ನು ನೀಡದಿರಲು ಕಾರಣಗಳೇನು; (ಪೂರ್ಣ ಮಾಹಿತಿ ನೀಡುವುದು) | ಸರ್ಕಾರಿ ನೌಕರರಿಗೆ ಚಿಕಿತ್ಸೆ ಪಡೆದ ನಂತರ ವೈದ್ಯಕೀಯ ವೆಚ್ಚದ ಸದರಿ ಮೊತ್ತವನ್ನು ನಿಯಮಾನುಸಾರ ಪರಿಶೀಲಿಸಿ ಹಿಂಬರಿಸಲಾಗುತ್ತಿತ್ತು. ಪ್ರಸ್ತುತ ಜ್ಯೋತಿ ಸಂಜೀವಿನಿ ಯೋಜನೆಯಡಿ ನಗದು ರಹಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಆದರೆ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು-1995ರ ವ್ಯಾಪ್ತಿಗೆ ಒಳಪಡುತ್ತಾರೆ ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.<br><br>ಮುಂದುವರೆದು, ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ -ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ ಖಾಸಗಿ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಒಳಪಡುವುದಿಲ್ಲ. |
| ಇ) | ರಾಜ್ಯದ ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರು ಹಾಗೂ ನೌಕರರಿಗೂ, ಸರ್ಕಾರಿ ಶಾಲಾ ಕಾಲೇಜುಗಳ ನೌಕರರಿಗೆ ನೀಡುತ್ತಿರುವ ಮಾದರಿಯಲ್ಲಿಯೇ ಜ್ಯೋತಿ ಸಂಜೀವಿನಿ ಆರೋಗ್ಯ ಸೌಲಭ್ಯವನ್ನು ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಮಾಹಿತಿ ನೀಡುವುದು) | |

ಸಂಖ್ಯೆ: ಇಪಿ 518 ಎಸ್ಇಎಸ್ 2023

**(ಎಸ್.ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.